# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಹೆಚ್.ಎ.ಸೋಮಶೇಖರ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ಸ್ಥಳ ನಿಯುಕ್ತಿ ಬಗ್ಗೆ.

**ಓದಲಾಗಿದೆ:-**

1) ಅಧಿಸೂಚನೆ ಸಂಖ್ಯೆ:ಗ್ರಾಅಪ 115 ಸೇಶಿಕಾ 2012, ದಿನಾಂಕ: 10-05-2012.

2) ಕರ್ನಾಟಕ ಆಡಳಿತ ನ್ಯಾಯಮಂಡಳಿಯು ಅರ್ಜಿ ಸಂಖ್ಯೆ:2325/2012 A/W caveat A.No.173/2012 ರಲ್ಲಿ ದಿನಾಂಕ: 16-05-2012 ರಂದು ನೀಡಿರುವ ಮಧ್ಯಂತರ ಆದೇಶ.

3) ಲೋಕೋಪಯೋಗಿ ಇಲಾಖೆಯ ಅಧಿಸೂಚನೆ ಸಂಖ್ಯೆ. ಲೋ ಇ 335 ಸೇಸಎ 2012, ದಿನಾಂಕ. 15-06-2012.

*****

**ಪ್ರಸ್ತಾವನೆ:**

ಶ್ರೀ ಹೆಚ್.ಎ.ಸೋಮಶೇಖರ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮೈಸೂರು ಇಲ್ಲಿ ಶ್ರೀ ಸಿ.ವಿ.ಸುರೇಶ್‌ಬಾಬು ಇವರ ಸ್ಥಾನಕ್ಕೆ ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ: 10-05-2012ರ ಅಧಿಸೂಚನೆಯಲ್ಲಿ ವರ್ಗಾಯಿಸಲಾಗಿತ್ತು. ಈ ಆದೇಶದ ವಿರುದ್ಧ ಶ್ರೀ ಸಿ.ವಿ.ಸುರೇಶ್‌ಬಾಬು, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ಅರ್ಜಿ ಸಂಖ್ಯೆ: 2325/2012 ಅನ್ನು ಸಲ್ಲಿಸಿದ್ದರು.

ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ಅರ್ಜಿ ಸಂಖ್ಯೆ:2325/2012 A/W caveat A.No.173/2012 ಅನ್ನು ಪರಿಶೀಲಿಸಿ ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿನಾಂಕ: 16-05-2012ರ ಮಧ್ಯಂತರ ಆದೇಶದಲ್ಲಿ ಈ ಕೆಳಕಂಡಂತೆ ನಿರ್ದೇಶಿಸಿರುತ್ತದೆ:-

> *". . . We direct that the applicant shall not be relieved of his duties in PRE Sub-division, Mysore in pursuance of Notification bearing No. Gra Aa Pa 115 Seshika 2012, dated. 10-05-2012 for a period of three months or until a posting is given to him, whichever is earlier*
>
> *Respondnet-1 shall be informed that intimation shall be sent to the State Government in the PWD to provide a posting to the applicant.*
>
> *During the period of stay, that applicant shall be continued as AEE, P.R.E. Sub-division, Mysore".*

ಲೋಕೋಪಯೋಗಿ ಇಲಾಖೆಯು ಶ್ರೀ ಸಿ.ವಿ.ಸುರೇಶ್‌ಬಾಬು, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರನ್ನು ಸುಸ್ಥಿರ ಕರಾವಳಿ ಸಂರಕ್ಷಣೆ ಮತ್ತು ನಿರ್ವಹಣಾ ಯೋಜನೆ ಮೇಲುಸ್ತುವಾರಿ ಘಟಕ, ಮಂಗಳೂರು ಇಲ್ಲಿ ಖಾಲಿ ಇರುವ ಹುದ್ದೆಗೆ ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ದಿನಾಂಕ. 15-06-2012ರ ಅಧಿಸೂಚನೆಯಲ್ಲಿ ಸ್ಥಳನಿಯುಕ್ತಿಗೊಳಿಸಿರುತ್ತದೆ.

ಆದ್ದರಿಂದ, ಶ್ರೀ ಹೆಚ್.ಎ.ಸೋಮಶೇಖರ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮೈಸೂರು ಹುದ್ದೆಗೆ ಸ್ಥಳನಿಯುಕ್ತಿಗೊಳಿಸಲು ನಿರ್ಧರಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**<u>ಆದೇಶ ಸಂಖ್ಯೆ.ಗ್ರಾಅಪ 216 ಜಿಪಅ 2012, ಬೆಂಗಳೂರು, ದಿನಾಂಕ.22-6-2012</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಶ್ರೀ ಹೆಚ್.ಎ.ಸೋಮಶೇಖರ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮೈಸೂರು ಹುದ್ದೆಗೆ ಸ್ಥಳನಿಯುಕ್ತಿಗೊಳಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ<br>ಮತ್ತು ಅವರ ಹೆಸರಿನಲ್ಲಿ

22/6/12

(ಗೋಪಾಲ್)<br>ಸರ್ಕಾರದ ಉಪ ಕಾರ್ಯದರ್ಶಿ(ಆಡಳಿತ-1),<br>ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

22/6/12

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ/ ಜಲಸಂಪನ್ಮೂಲ ಇಲಾಖೆ/ ಸಣ್ಣ ನೀರಾವರಿ ಇಲಾಖೆ.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು,
4. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕೆ.ಆರ್.ಆರ್.ಡಿ.ಎ., ರಾಜಕುಮಾರ್ ರಸ್ತೆ, ರಾಜಾಜಿನಗರ 1ನೇ ಬ್ಲಾಕ್, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
6. ನಿರ್ದೇಶಕರು, ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಂಸ್ಥೆ, ಕಾವೇರಿ ಭವನ, ಬೆಂಗಳೂರು.
7. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು.
8. ಸಂಬಂಧಪಟ್ಟ ಅಧಿಕಾರಿಗಳಿಗೆ.
9. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ) / (ಸೇವೆಗಳು-ಸಿ)
10. ಸರ್ಕಾರದ ಅಧೀನ ಕಾರ್ಯದರ್ಶಿ, ಗ್ರಾ.ಅ.ಪಂ.ರಾಜ್ ಇಲಾಖೆ (ಸೇವೆಗಳು-ಬಿ).
11. ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
12. ಗ್ರಾ.ಅ.ಪಂ.ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ/ ಉಪ ಕಾರ್ಯದರ್ಶಿ ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
13. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
14. ರಕ್ಷಾ ಕಡತ / ಮಾಹಿತಿ ಕೇಂದ್ರ/ ಹೆಚ್ಚುವರಿ ಪ್ರತಿಗಳು.